# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 16-07-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಮಾಧವಿ ವೈದ್ಯಾಧಿಕಾರಿಯವರ ಕಛೇರಿ, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)
6. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಸಂಗೀತಾ, ಇಂಜಿನಿಯರ್, ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಶ್ರೀ ವೆಂಕಟೇಶ್, ತೋಟಗಾರಕೆ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ರವರು ಮಾತನಾಡಿ, ಕಾಚರಕಹಳ್ಳಿ ವ್ಯಾಪ್ತಿಯ 2ನೇ ಅಡ್ಡರಸ್ತೆ, ನೀಲಗಿರಿ ರಸ್ತೆಯ ಚರಂಡಿಗಳಲ್ಲಿ ಹೂಳು ತುಂಬಿದ್ದು, ಇದರಿಂದ ಮಳೆಯ ನೀರು ರಸ್ತೆಗೆ ಹರಿಯುತ್ತಿರುವುದು ಕಂಡುಬಂದಿದ್ದು, ಈ ಪ್ರದೇಶದ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು, ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಡೆಬ್ರೀಸ್ ಹಾಗೂ ಚರಂಡಿಯಲ್ಲಿ ತುಂಬಿರುವ ಹೂಳನ್ನು ತೆರವುಗೊಳಿಸಲು ಈಗಾಗಲೇ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಕಾಮಗಾರಿಯನ್ನು ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಲಾಯಿತು.

2) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ಕಾಚರಕನಹಳ್ಳಿ ವ್ಯಾಪ್ತಿಯ ಸೇಂಟ್ ಪಾಲ್ ಶಾಲೆಯ ರಸ್ತೆಯಲ್ಲಿ ಚರಂಡಿ ಮೇಲಿನ ಕಲ್ವರ್ಟ್ ಸ್ಲಾಬ್‌ಗಳು ಹಾಳಾಗಿದ್ದು, ಸಾರ್ವಜನಿಕರು ಯಾವುದೇ ಸಂದರ್ಭದಲ್ಲಿ ಚರಂಡಿಯಲ್ಲಿ ಬೀಳುವ ಸಂಭವವಿದ್ದು,



Scanned with CamScanner

ಕೂಡಲೇ ಕಲ್ವರ್ಟ್ ಸ್ಲಾಬ್‌ಗಳನ್ನು ಹಾಕಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು, ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸದರಿ ಸ್ಥಳದಲ್ಲಿ ಕಲ್ವರ್ಟ್ ಸ್ಲಾಬ್‌ಗಳನ್ನು ಅಳವಡಿಸಲು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಲಾಯಿತು.

3) <u>ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)</u> ರವರು ಮಾತನಾಡಿ, ವಾರ್ಡ್ ವ್ಯಾಪ್ತಿಯ ಕಮ್ಮನಹಳ್ಳಿ ಮುಖ್ಯರಸ್ತೆಯ ಪಾದಾಚಾರಿ ಮಾರ್ಗದಲ್ಲಿರುವ ಟೈಲ್ಸ್‌ಗಳು ಮಳೆಯಿಂದ ಹಾಳಾಗಿದ್ದು, ಪಾದಾಚಾರಿಗಳಿಗೆ ತುಂಬಾ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿ, ಟೈಲ್ಸ್‌ಗಳನ್ನು ಅಚ್ಚುಕಟ್ಟಾಗಿ ಜೋಡಿಸಿ, ಸಾರ್ವಜನಿಕರ ಸಂಚಾರಕ್ಕೆ ಅನುವು ಮಾಡಿಕೊಡಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಗೆ ತಿಳಿಸಿದರು.

4) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)</u> ರವರು ಮಾತನಾಡಿ, ಕಾಚರಕನಹಳ್ಳಿ ವಾರ್ಡ್ ವ್ಯಾಪ್ತಿಯ ಹೆಚ್.ಆರ್.ಬಿ.ಆರ್ ಲೇಔಟ್, 3ನೇ ಬ್ಲಾಕ್ ನಲ್ಲಿ ಮರಗಳು ಹೇರಳವಾಗಿ ಬೆಳೆದಿದ್ದು, ರಸ್ತೆ ಬದಿಯ ಬೀದಿ ದೀಪಗಳ ಬೆಳಕು ರಸ್ತೆಗೆ ಬೀಳದೇ ಇರುವುದರಿಂದ ರಾತ್ರಿ ಸಮಯದಲ್ಲಿ ಈ ರಸ್ತೆಗಳಲ್ಲಿ ಸಂಚರಿಸಲು ಕಷ್ಟಕರವಾಗಿರುವುದಾಗಿ, ಮರಗಳ ಕೊಂಬೆ ರೆಂಬೆಗಳನ್ನು ಕೂಡಲೇ ಟ್ರಿಮ್ ಮಾಡಲು ಕ್ರಮ ವಹಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸಭೆಯಲ್ಲಿ ಹಾಜರಿದ್ದ ಅರಣ್ಯ ವಿಭಾಗದ ಅಧಿಕಾರಿಯವರಿಗೆ ಪ್ರಸ್ತಾಪಿತ ಪ್ರದೇಶದ ರಸ್ತೆಗಳ ಬದಿಯಲ್ಲಿರುವ ಮರದ ಕೊಂಬೆ ರೆಂಬೆಗಳನ್ನು ಕೂಡಲೇ ಟ್ರಿಮ್ ಮಾಡಿ ಸದರಿ ಸ್ಥಳದಿಂದ ತೆರವುಗೊಳಿಸಲು ಕ್ರಮ ವಹಿಸಲು ಸೂಚಿಸಿದರು.

5) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)</u> ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಐ ಮಸ್ತ್ ಲೈಟ್‌ಗಳು ಉರಿಯುತ್ತಿರುವುದಿಲ್ಲ ಹಾಗೂ ಡಿ.ಪಿ ಸ್ವಿಚ್‌ಗಳು ಕಾರ್ಯನಿರ್ವಹಿಸುತ್ತಿರುವುದಿಲ್ಲ ಎಂದು ಈ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಬೀದಿ ದೀಪಗಳ ಗುತ್ತಿಗೆದಾರರು ಐ ಮಸ್ತ್ ಲೈಟ್‌ಗಳನ್ನು ದುರಸ್ತಿ ಪಡಿಸಲು ಕ್ರಮ ಕೈಗೊಳ್ಳುವುದಾಗಿ ಹಾಗೂ ಡಿ.ಪಿ ಸ್ವಿಚ್‌ಗಳನ್ನು ದುರಸ್ತಿಪಡಿಸುವುದಾಗಿ ಹಿಂದಿನ ಸಭೆಯಲ್ಲಿ ತಿಳಿಸಲಾಗಿದ್ದು, ಈರೆವಿಗೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಮತ್ತೊಮ್ಮೆ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಿದರು.

6) <u>ಮಾಧವಿ ವೈದ್ಯಾಧಿಕಾರಿಯವರ ಕಛೇರಿ, ರವರು ಮಾತನಾಡಿ,</u> ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಒಟ್ಟು 03 ಸಕ್ರಿಯ ಪ್ರಕರಣಗಳಿದ್ದು, 18 ವಯೋಮಾನ ಹಾಗೂ 60 ವಯೋಮಾನ ತುಂಬಿದ ನಾಗರೀಕರಿಗೆ ಬೂಸ್ಟರ್ ಡೋಸ್ ನೀಡಲಾಗುತ್ತಿದ್ದು, ಇದರ ಸದುಪಯೋಗ ಪಡೆದುಕೊಳ್ಳಲು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು | Prasanna Kumar A |
| ಸಹಾಯಕ ಅಭಿಯಂತರರು | ಅಧ್ಯಕ್ಷರು |
| ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ | (ನೋಡೆಲ್ ಅಧಿಕಾರಿಗಳು) |
| | ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ |

<u>ಪ್ರತಿಯನ್ನು</u>

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.



Scanned with CamScanner